ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 4 ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 26/12/20

# ಮತ್ತೆ ನಾಯಕತ್ವ ಪ್ರಶ್ನೆ ಎತ್ತಿದ ಯತ್ನಾಳ್

## ಬದಲಾವಣೆ ಇಲ್ಲವೇ ಇಲ್ಲ: ಬಿಜೆಪಿ ನಾಯಕರಿಂದ ತಿರುಗೇಟು

■ **ವಿಕ ಸುದ್ದಿಲೋಕ** ಬೆಂಗಳೂರು 26/12

ನಾಯಕತ್ವದ ಬಗ್ಗೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪುನಃ ವಿವಾದಾತ್ಮಕ ಹೇಳಿಕೆ ನೀಡುವುದರೊಂದಿಗೆ ಈ ವಿಚಾರದಲ್ಲಿ ಮತ್ತೆ ಚರ್ಚೆ ಶುರುವಾಗಿದೆ. ಆದರೆ, ಯತ್ನಾಳ್ ಹೇಳಿಕೆಗೆ ತಿರುಗೇಟು ನೀಡಿರುವ ಕೇಂದ್ರ ಸಚಿವ ಡಿ.ವಿ. ಸದಾನಂದಗೌಡ, ಡಿಸಿಎಂ ಡಾ.ಸಿ.ಎನ್. ಅಶ್ವತ್ಥನಾರಾಯಣ ಹಾಗೂ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್ ನಾಯಕತ್ವ ಬದಲಾವಣೆಯ ಪ್ರಶ್ನೆಯೇ ಇಲ್ಲ ಎಂದಿದ್ದಾರೆ.

ಬಸನಗೌಡ ಪಾಟೀಲ್ ಯತ್ನಾಳ್ ಈ ಹಿಂದೆಯೂ ನಾಯಕತ್ವದ ಸಂಬಂಧದಲ್ಲಿ ಬಹಿರಂಗವಾಗಿ ಮಾತನಾಡಿದ್ದರು. ನಂತರ ಸ್ವಲ್ಪ ಕಾಲ ಮೌನಕ್ಕೆ ಜಾರಿದ್ದರು. ವಿಜಯಪುರದಲ್ಲಿ ಶುಕ್ರವಾರ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಹೇಳಿಕೆ ನೀಡಿದ ಅವರು, ಈ ಬಾರಿ ಬೇರೆಯದೇ ರೀತಿಯಲ್ಲಿ ಗಮನ ಸೆಳೆದಿದ್ದಾರೆ. ''ಸಂಕ್ರಾಂತಿ ಬಳಿಕ ಸಂಪುಟ ವಿಸ್ತರಣೆಯಾಗುವುದೋ ಅಥವಾ ಬದಲಾವಣೆ ಆಗುವುದೋ ಗೊತ್ತಿಲ್ಲ, ಉತ್ತರಾಯಣದಲ್ಲಿ ಉತ್ತರ ಕರ್ನಾಟಕಕ್ಕೆ ಒಳ್ಳೆಯದಾಗಬಹುದು,'' ಎನ್ನುವುದು ಯತ್ನಾಳ್ ಹೇಳಿಕೆ ಸಾರಾಂಶ. ಇದು ರಾಜಕೀಯ ವಲಯದಲ್ಲಿ ಚರ್ಚೆ ಹುಟ್ಟು ಹಾಕುವಂತೆ ಮಾಡಿದೆ. ಈ ಮೂಲಕ ಸಿಎಂ ಯಡಿಯೂರಪ್ಪ ಅವರಿಗೆ ಯತ್ನಾಳ್ ಪರೋಕ್ಷವಾಗಿ ಟಾಂಗ್ ಕೊಟ್ಟಿದ್ದಾರೆ ಎಂದು ವ್ಯಾಖ್ಯಾನಿಸಲಾಗುತ್ತಿದೆ.

ಜ.16ರಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿಜಯಪುರಕ್ಕೆ ಬರುತ್ತಿದ್ದಾರೆ. ಅವರ ಆಗಮನದ





ಮುಂಚೆಯೇ ರಾಜಕೀಯ ವಿದ್ಯಮಾನಗಳು ನಡೆಯಬಹುದು ಎಂದು ಯತ್ನಾಳ ಭವಿಷ್ಯ ನುಡಿದಿದ್ದರು.

**ಡಿ.ವಿ ಸದಾನಂದ ಗೌಡ ತರಾಟೆ**

ಯತ್ನಾಳ್ ಹೇಳಿಕೆಗೆ ಅತ್ಯಂತ ಖಾರವಾಗಿ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಡಿ.ವಿ.ಸದಾನಂದಗೌಡ, ''ಯಾವುದೇ ಸಂಗತಿಯನ್ನು ಯಾವಾಗ ಎಲ್ಲಿ ಹೇಳಬೇಕೋ ಅಲ್ಲಿ ಹೇಳಿದರೆ ಅರ್ಥ ಬರುತ್ತದೆ. ಗೌರವವೂ ಇರುತ್ತದೆ. ಅಸ್ತಿತ್ವ ಕಳೆದುಕೊಳ್ಳುವ ಭಯದಲ್ಲಿರುವ ಯತ್ನಾಳ್ ಹಾದಿ ಬೀದಿಯಲ್ಲಿ ಮಾತನಾಡುತ್ತಿದ್ದಾರೆ,'' ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

''ಯತ್ನಾಳ್ ಒಬ್ಬ ಆರ್ಡಿನರಿ ಶಾಸಕ. ಅವರು ಪಕ್ಷದ ರಾಷ್ಟ್ರೀಯ ನಾಯಕರಲ್ಲ, ರಾಜ್ಯಾಧ್ಯಕ್ಷರೂ ಅಲ್ಲ, ಯಾವುದೇ ಪ್ರಮುಖ ಸ್ಥಾನಮಾನವೂ ಅವರದ್ದಲ್ಲ. ಮಾಧ್ಯಮದ ಮುಂದೆ ಏನೇನೋ ಹೇಳುವುದು ಶೋಭೆಯಲ್ಲ, ಅವರಿಗೆ ಏನನ್ನಾದರೂ ಹೇಳುವುದಿದ್ದರೆ ಪಕ್ಷದ ರಾಷ್ಟ್ರೀಯ ನಾಯಕರು, ರಾಜ್ಯಾಧ್ಯಕ್ಷರು, ಸಿಎಂ ಜತೆಗೆ ಚರ್ಚಿಸಬೇಕು. ಅದನ್ನು ಬಿಟ್ಟು ಬಹಿರಂಗ ಹೇಳಿಕೆ ನೀಡಬಾರದು,'' ಎಂದು ಡಿವಿಎಸ್ ತಾಕೀತು ಮಾಡಿದರು.

ಯತ್ನಾಳ್ ಒಬ್ಬ ಆರ್ಡಿನರಿ ಶಾಸಕ. ಹಾದಿ ಬೀದಿಯಲ್ಲಿ ಮಾತನಾಡುವುದನ್ನು ಬಿಟ್ಟು ಅವರ ಅನಿಸಿಕೆಯನ್ನು ಪಕ್ಷದ ಚೌಕಟ್ಟಿನಲ್ಲಿ ಹೇಳಿಕೊಳ್ಳಲಿ.

– **ಡಿ.ವಿ.ಸದಾನಂದಗೌಡ** ಕೇಂದ್ರ ಸಚಿವ

ನಾನು ಅಟಲ್ ಬಿಹಾರಿ ವಾಜಪೇಯಿ ಸಂಪುಟದಲ್ಲಿ ಸಚಿವನಾಗಿದ್ದವನು, ಸದಾನಂದಗೌಡರು ಈಗ ಸಚಿವರಾಗಿದ್ದಾರೆ. ಯಾರು ಹಿರಿಯರು ಎಂಬುದು ಗೊತ್ತಾಗುವುದಿಲ್ಲವೇ?

**–ಬಸನಗೌಡ ಪಾಟೀಲ್ ಯತ್ನಾಳ್**

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಪ್ರಶ್ನೆಯಿಲ್ಲ, ಯಡಿಯೂರಪ್ಪ ಅವರೇ ನಮ್ಮ ನಾಯಕರು. ಅವರೇ ಮುಂದುವರಿಯುತ್ತಾರೆ.

– **ಡಾ.ಸಿ.ಎನ್.ಅಶ್ವತ್ಥನಾರಾಯಣ** ಡಿಸಿಎಂ

ನಾಯಕತ್ವ ಬದಲಾವಣೆ ಇಲ್ಲವೆಂದು ನಮ್ಮ ಪಕ್ಷದ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಅವರೇ ಹೇಳಿದ್ದಾರೆ. ಈ ಬಗ್ಗೆ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಅವರೂ ಹೇಳಿಕೆ ನೀಡಿದ್ದಾರೆ. ಸಂತೋಷ್ ಅವರೂ ಸ್ಪಷ್ಟಪಡಿಸಿದ್ದಾರೆ. ಹಾಗಾಗಿ ಯತ್ನಾಳ್ ಇಂತಹ ಗೊಂದಲ ಸೃಷ್ಟಿಸಬಾರದು.

**–ಎನ್.ರವಿಕುಮಾರ್**

ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ